# ಮೈಸೂರು ವಿಶ್ವವಿದ್ಯಾನಿಲಯ

## ವಿದ್ಯಾರ್ಥಿ ಕ್ಷೇಮಪಾಲನಾ ನಿರ್ದೇಶನಾಲಯ

ಮಾನಸಗಂಗೋತ್ರಿ, ಮೈಸೂರು – 570006

**ದೂರವಾಣಿ: 0821–2419318/386/429** e-mail : dswuommgm@gmail.com


ಸಂಖ್ಯೆ: ವಿಕ್ಷೇಪಾ.7/ 981 /2019–20 ದಿನಾಂಕ: 21–10–2019

## ಸುತ್ತೋಲೆ

2019–2020ನೇ ಶೈಕ್ಷಣಿಕ ಸಾಲಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿಶೇಷಚೇತನ ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾನಿಲಯದ ವತಿಯಿಂದ ನೀಡಲಾಗುವ ಧನಸಹಾಯಕ್ಕೆ; ವಿಶ್ವವಿದ್ಯಾನಿಲಯದ ಅಧೀನ ಕಾಲೇಜುಗಳು, ಸಂಯೋಜಿತ ಕಾಲೇಜುಗಳು ಹಾಗೂ ಸ್ನಾತಕೋತ್ತರ ಅಧ್ಯಯನ ವಿಭಾಗ/ಕೇಂದ್ರಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ವಿಶೇಷಚೇತನ ವಿದ್ಯಾರ್ಥಿಗಳಿಂದ ನಿಗದಿತ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಇದಕ್ಕೆ ಸಂಬಂಧಿಸಿದಂತೆ ಅರ್ಜಿ ನಮೂನೆ, ಪ್ರಮಾಣ ಪತ್ರ ಹಾಗೂ ಹಣ ಸಂದಾಯ ರಶೀದಿಗಳನ್ನು ಈ ಸುತ್ತೋಲೆಯೊಂದಿಗೆ ಲಗತ್ತಿಸಿದೆ.

ಭರ್ತಿ ಮಾಡಿದ ಅರ್ಜಿಗಳನ್ನು ನಿರ್ದೇಶಕರು, ವಿದ್ಯಾರ್ಥಿ ಕ್ಷೇಮಪಾಲನಾ ನಿರ್ದೇಶನಾಲಯ, ಇ.ಎಂ.ಆರ್.ಸಿ. ಕಟ್ಟಡ ಮಾನಸಗಂಗೋತ್ರಿ, ಮೈಸೂರು, ಇಲ್ಲಿಗೆ **ದಿನಾಂಕ 31–12–2019 ರೊಳಗಾಗಿ ಸಲ್ಲಿಸಲು ತಿಳಿಸಲಾಗಿದೆ. ನಂತರ ಬಂದ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ (ಹೆಚ್ಚಿನ ವಿದ್ಯಾರ್ಥಿಗಳಿದ್ದಲ್ಲಿ ನಮೂನೆ, ಪ್ರಮಾಣಪತ್ರ ಹಾಗೂ ಹಣ ಸಂದಾಯ ರಶೀದಿಯನ್ನು ಜೆರಾಕ್ಸ್ ಮಾಡಿಸಿಕೊಳ್ಳುವುದು). ಅಪೂರ್ಣ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಹಾಗೂ ಅಂತಹ ಅರ್ಜಿಗಳನ್ನು ವಾಪಸ್ಸು ಮಾಡಲಾಗುವುದು. ನಂತರ ಈ ನಿರ್ದೇಶನಾಲಯದ ವತಿಯಿಂದ ಯಾವುದೇ ಪತ್ರ ವ್ಯವಹಾರವಿರುವುದಿಲ್ಲ.**

**ನಿಬಂಧನೆಗಳು:**

1. ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿಗಳಿಂದ ದೃಢೀಕರಿಸಲ್ಪಟ್ಟ ಅಂಗವಿಕಲತೆಯ ಗುರುತಿನ ಚೀಟಿ ಪುಸ್ತಕದ ಜೆರಾಕ್ಸ್ ಪ್ರತಿಯನ್ನು ಲಗತ್ತಿಸಬೇಕು.
2. ಅಂಗವಿಕಲತೆಯು ಎದ್ದು ಕಾಣುವಂತಹ 4"X6" ಅಳತೆಯ ಇತ್ತೀಚಿನ ಭಾವಚಿತ್ರವನ್ನು ಲಗತ್ತಿಸಬೇಕು.
3. ಅರ್ಜಿಯ ಜೊತೆಗೆ ಲಗತ್ತಿಸಿರುವ ಹಣ ಸಂದಾಯ ರಶೀದಿಗೆ ವಿದ್ಯಾರ್ಥಿಯು ಸಹಿ ಮಾಡಿ, ಪ್ರಾಂಶುಪಾಲರು/ಅಧ್ಯಕ್ಷರು/ನಿರ್ದೇಶಕರಿಂದ ದೃಢೀಕರಿಸಿ ಕಳುಹಿಸಬೇಕು. ಮೊತ್ತವನ್ನು ರಶೀದಿಯಲ್ಲಿ ಯಾವುದೇ ಕಾರಣಕ್ಕೂ ನಮೂದಿಸಬಾರದು. ಒಂದು ವೇಳೆ ಧನಸಹಾಯ ಮಂಜೂರಾಗದಿದ್ದಲ್ಲಿ ಈ ರಶೀದಿಯನ್ನು ಹಿಂದಿರುಗಿಸಲಾಗುವುದು.
4. ಶೇ.40% ಕ್ಕಿಂತ ಕಡಿಮೆ ಅಂಗವಿಕಲತೆಯಿರುವವರು ಅರ್ಜಿಯನ್ನು ಸಲ್ಲಿಸಬಾರದು.
5. ವಿದ್ಯಾರ್ಥಿಗಳು ಘನ ಸರ್ವೋಚ್ಛ ನ್ಯಾಯಾಲಯದ ಆದೇಶದಂತೆ ಕಾಲೇಜು/ವಿಭಾಗಗಳಲ್ಲಿ ಕಡ್ಡಾಯವಾಗಿ ಶೇಕಡ 75%ಕ್ಕೂ ಹೆಚ್ಚಿನ ಹಾಜರಾತಿಯನ್ನು ಹೊಂದಿರಬೇಕಾಗಿರುತ್ತದೆ.
6. ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಧನಸಹಾಯದ ಮೊತ್ತವನ್ನು ಸಂದಾಯ ಮಾಡುವುದರಿಂದ, ವಿದ್ಯಾರ್ಥಿಯು ಬ್ಯಾಂಕಿನ ಹೆಸರು, ಉಳಿತಾಯ ಖಾತೆ ಸಂಖ್ಯೆ ಹಾಗೂ IFSC Code ಸ್ಪಷ್ಟವಾಗಿ ಕಾಣುವಂತಹ ಬ್ಯಾಂಕ್ ಪಾಸ್‌ಬುಕ್‌ನ ಜೆರಾಕ್ಸ್ ಪ್ರತಿಯನ್ನು ಲಗತ್ತಿಸಬೇಕು.

(ಪ್ರೊ. ಸಿ. ರಾಮಸ್ವಾಮಿ)
ನಿರ್ದೇಶಕ

ಗೆ,

ವಿಶ್ವವಿದ್ಯಾನಿಲಯದ ಎಲ್ಲಾ ಅಧೀನ ಮತ್ತು ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರು ಹಾಗೂ ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳ/ಕೇಂದ್ರಗಳ ಅಧ್ಯಕ್ಷರು/ನಿರ್ದೇಶಕರು, ಮೈಸೂರು, ಮಂಡ್ಯ, ಹಾಸನ ಮತ್ತು ಚಾಮರಾಜನಗರ

# ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ, ಕ್ರಾಫರ್ಡ್ ಭವನ, ಮೈಸೂರು – 570 005

website : www.uni-mysore.ac.in

ವಿಷಯ : ವಿಶೇಷಚೇತನ ವಿದ್ಯಾರ್ಥಿಗಳಿಗೆ ಧನ ಸಹಾಯ ಹಂಚಿಕೆ ಮಾಡುವ ಬಗ್ಗೆ.

ಉಲ್ಲೇಖ : 1.ದಿನಾಂಕ 01-07-2019 ರಂದು ನಡೆದ 2019-20 ನೇ ಸಾಲಿನ ವಿಶ್ವವಿದ್ಯಾನಿಲಯದ ವಿದ್ಯಾರ್ಥಿನಿಲಯಗಳ 'ಆಡಳಿತ, ನಿರ್ವಹಣೆ ಹಾಗೂ ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ಸಲಹಾ ಸಮಿತಿ' ಸಭೆಯ ತೀರ್ಮಾನ

2.ವಿದ್ಯಾರ್ಥಿ ಕ್ಷೇಮಪಾಲನಾ ನಿರ್ದೇಶನಾಲಯದ ಸುತ್ತೋಲೆ ಸಂಖ್ಯೆ : ವಿ.ಕ್ಷೇ.ಪಾ.7/981/2019-20 ದಿನಾಂಕ : 21-10-2019

*=*=*

ಪ್ರಸ್ತಾವನೆ : ವಿಶ್ವವಿದ್ಯಾನಿಲಯದ ಅಧೀನ ಕಾಲೇಜುಗಳು ಸಂಯೋಜಿತ ಕಾಲೇಜುಗಳು ಹಾಗೂ ಸ್ನಾತಕೋತ್ತರ ಅಧ್ಯಯನ ವಿಭಾಗ / ಮಂಡ್ಯ, ಹಾಸನ ಮತ್ತು ಚಾಮರಾಜನಗರ ಕೇಂದ್ರಗಳಲ್ಲಿ 2019-20ನೇ ಶೈಕ್ಷಣಿಕ ಸಾಲಿನಲ್ಲಿ ವ್ಯಾಸಂಗ ಮಾಡುತ್ತಿದ್ದ ವಿಶೇಷಚೇತನ ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾನಿಲಯದ ವತಿಯಿಂದ ನೀಡಲಾಗುವ ಧನ ಸಹಾಯವನ್ನು ಕೋರಿ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳಿಗೆ ಪ್ರತಿ ಶೈಕ್ಷಣಿಕ ಸಾಲಿನಲ್ಲಿಯೂ ಸಂಬಂಧಿಸಿದ ಶೀರ್ಷಿಕೆಯಡಿ ನಿಗದಿಪಡಿಸಲಾಗುವ ಮೊತ್ತವನ್ನು ಸಮಾನವಾಗಿ ಹಂಚಿಕೆ ಮಾಡಲು ಉಲ್ಲೇಖ (1)ರ ಸಭೆಯಲ್ಲಿ ತೀರ್ಮಾನಿಸಲಾಗಿತ್ತು. 2019-20ನೇ ಸಾಲಿನ ಆಯವ್ಯಯದಲ್ಲಿ ಮೀಸಲಿಟ್ಟಿರುವ ರೂ. 2,50,000-00ಗಳಿಗೆ ಒಟ್ಟು 202 ವಿಶೇಷಚೇತನ ವಿದ್ಯಾರ್ಥಿಗಳು ಉಲ್ಲೇಖ (2)ರ ಸುತ್ತೋಲೆಯನ್ವಯ ಧನಸಹಾಯಕ್ಕಾಗಿ ಅರ್ಜಿ ಸಲ್ಲಿಸಿರುತ್ತಾರೆ. ಅದರಲ್ಲಿ 22 ವಿಶೇಷ ಚೇತನ ವಿದ್ಯಾರ್ಥಿಗಳು ಸಲ್ಲಿಸಿದ್ದ ಅರ್ಜಿಗಳು ಅಪೂರ್ಣಗೊಂಡಿರುತ್ತದೆ, ಅದನ್ನು ಹೊರತುಪಡಿಸಿ, ಉಳಿದ 180 ವಿಶೇಷ ಚೇತನ ವಿದ್ಯಾರ್ಥಿಗಳಿಗೆ ತಲಾ ಒಬ್ಬರಿಗೆ ರೂ. 1,388/-ರಂತೆ 180 ವಿಶೇಷಚೇತನ ವಿದ್ಯಾರ್ಥಿಗಳಿಗೆ ರೂ. 2,49,840/-ಗಳನ್ನು ಹಂಚಿಕೆ ಮಾಡಿ ಉಳಿದ ರೂ. 160/-ಗಳನ್ನು ವಿಶ್ವವಿದ್ಯಾನಿಲಯದ ಜಿ.ಆರ್.ಎ. ಖಾತೆಗೆ ಜಮಾ ಮಾಡುವ ಪ್ರಸ್ತಾವನೆಯನ್ನು ಮಾನ್ಯ ಕುಲಪತಿಗಳು ಕಡತ ಸಂಖ್ಯೆ : ವಿ.ಕ್ಷೇ.ಪಾ./7/25/2019-20 ಪುಟ ಸಂಖ್ಯೆ 26 ರಲ್ಲಿ ಒಪ್ಪಿರುವುದರಿಂದ ಈ ಆದೇಶ.

**ವಿ.ವಿ. ಆದೇಶ ಸಂಖ್ಯೆ : ವಿ.ಕ್ಷೇ.ಪಾ.7/25/ 97 /2019-20 ದಿನಾಂಕ : 08- 06-2020**

ಮಾನ್ಯ ಕುಲಪತಿಗಳ ಅನುಮೋದನೆ ಮೇರೆಗೆ 2019-20ನೇ ಶೈಕ್ಷಣಿಕ ಸಾಲಿನ ವಿಶ್ವವಿದ್ಯಾನಿಲಯದ ಅಧೀನ ಕಾಲೇಜುಗಳು, ಸಂಯೋಜಿತ ಕಾಲೇಜುಗಳು ಹಾಗೂ ಸ್ನಾತಕೋತ್ತರ ಅಧ್ಯಯನ ವಿಭಾಗವಾದ ಮಂಡ್ಯ, ಹಾಸನ ಮತ್ತು ಚಾಮರಾಜನಗರ ಕೇಂದ್ರಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿಶೇಷಚೇತನ ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾನಿಲಯದ ವತಿಯಿಂದ ಮೀಸಲಿರಿಸಿರುವ ಒಟ್ಟು ರೂ. 2,50,000-00 ಮೊತ್ತದಲ್ಲಿ, ಧನ ಸಹಾಯವನ್ನು ಕೋರಿ ಅರ್ಜಿ ಸಲ್ಲಿಸಿದ್ದ ಅರ್ಹ 180 ವಿದ್ಯಾರ್ಥಿಗಳಲ್ಲಿ ಒಬ್ಬ ವಿದ್ಯಾರ್ಥಿಗೆ ರೂ. 1,388/- ರಂತೆ 180 ವಿಶೇಷಚೇತನ ವಿದ್ಯಾರ್ಥಿಗಳಿಗೆ ರೂ. 2,49,840/-ಗಳನ್ನು ವಿದ್ಯಾರ್ಥಿಗಳ ಖಾತೆಗೆ ನೇರವಾಗಿ ಹಂಚಿಕೆ ಮಾಡಲು ಹಾಗೂ ಉಳಿದ ರೂ. 160/-ಗಳನ್ನು ವಿಶ್ವವಿದ್ಯಾನಿಲಯದ ಜಿ.ಆರ್.ಎ. ಖಾತೆಗೆ ಜಮಾ ಮಾಡಲು ಘಟನೋತ್ತರ ಅನುಮತಿ ನೀಡಲಾಗಿದೆ.

ಸದರಿ ವೆಚ್ಚವನ್ನು "2019-20ನೇ ಸಾಲಿನ ಆಯವ್ಯಯದಲ್ಲಿನ ಅಂಗವಿಕಲ ವಿದ್ಯಾರ್ಥಿಗಳಿಗೆ ನೆರವು-165' ಶೀರ್ಷಿಕೆಯಿಂದ ಮುಂಗಡವಾಗಿ ಪಡೆದ ಒಟ್ಟು ರೂ. 2,50,000-00ರಲ್ಲಿ ಭರಿಸಲು ಸಹ ಆದೇಶಿಸಲಾಗಿದೆ.

ಆದೇಶದ ಮೇರೆಗೆ

6/6/2020

ಕುಲಸಚಿವ

ಇವರಿಗೆ

1. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರ
2. ಅಪರ ನಿರ್ದೇಶಕರು, ಕರ್ನಾಟಕ ರಾಜ್ಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕ ಪತ್ರ ಇಲಾಖೆ, ಪ್ರಾಂತೀಯ (ವಿಭಾಗೀಯ) ಕಚೇರಿ, ಮೈಸೂರು ವಿಭಾಗ, ಮೈಸೂರು
3. ಮಾನ್ಯ ಕುಲಪತಿಗಳ/ಕುಲಸಚಿವರ ಆಪ್ತಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
4. ಕಚೇರಿ ಪ್ರತಿ